**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ಪಿ. ಸುಜಾ ಕುಶಾಲಪ್ಪ ರವರು ನಿಯಮ-330 ರಡಿ ಪ್ರಸ್ತಾಪಿರುವ- "ಕೊಡಗು ಜಿಲ್ಲೆಯಲ್ಲಿ ನಿರಂತರವಾಗಿ ಆನೆ ಮತ್ತು ಹುಲಿ ದಾಳಿಗಳು ನಡೆಯುತ್ತಿರುವುದು ತಮಗೆ ಗೊತ್ತಿರುವ ವಿಷಯವೇ ಆಗಿದೆ. ಈ ಆನೆ ದಾಳಿಗಳಿಂದಾಗಿ ಸಾವಿರಾರು ಎಕರೆ ಪ್ರದೇಶಗಳ ಬೆಳೆಗಳು ಹಾಳಾಗುವುದಲ್ಲದೆ ರೈತರಿಗೆ ಇದರಿಂದ ಅತೀವ ನಷ್ಟ ಉಂಟಾಗುತ್ತಿದೆ, ಅಷ್ಟೇ ಅಲ್ಲದೆ ರೈತರುಗಳು ತಮ್ಮ ಪ್ರಾಣವನ್ನೇ ಆನೆ ಮತ್ತು ಹುಲಿ ದಾಳಿಯಿಂದಾಗಿ ಕಳೆದುಕೊಳ್ಳುತ್ತಿದ್ದಾರೆ. ಈ ಕುರಿತು ನಿರಂತರವಾಗಿ ಹಿಂದಿನ ಸದನಗಳಿಂದಲೂ ಇದಕ್ಕೊಂದು ಶಾಶ್ವತವಾದ ಪರಿಹಾರವನ್ನು ಕಂಡುಕೊಳ್ಳಬೇಕೆಂದು ಸಂಬಂಧಿಸಿದ ಸಚಿವರಿಗೆ ಮನವಿಯನ್ನು ಮಾಡುತ್ತಿದ್ದೇವೆ ಆದರೂ ಇದರ ಬಗ್ಗೆ ಇಲಾಖೆಯು ಯಾವುದೇ ಕ್ರಮಗಳನ್ನು ಕೈಗೊಳ್ಳದೇ ಪ್ರಾಣ ಕಳೆದುಕೊಂಡ ರೈತರಿಗೆ ಪರಿಹಾರ ಧನವನ್ನು ನೀಡುವುದನ್ನು ಮಾಡುತ್ತಿದೆ. ಪ್ರಾಣ ಕಳೆದುಕೊಂಡ ರೈತರಿಗೆ ಪರಿಹಾರ ಧನವನ್ನು ನೀಡಿದಲ್ಲಿ ಹೋದ ಜೀವ ಮತ್ತೆ ಬಾರದು. ಈ ಹಿನ್ನೆಲೆಯಲ್ಲಿ ಇಂತಹ ಅಹಿತಕರ ಘಟನೆಗಳು ಮತ್ತೊಮ್ಮೆ ಜಿಲ್ಲೆಯಲ್ಲಿ ಮರುಕಳಿಸದಿರಲು ಆನೆ ಹಾಗೂ ವನ್ಯಜೀವಿಗಳ ದಾಳಿಗಳನ್ನು ತಪ್ಪಿಸಲು ಇಲಾಖೆಯು ಶಾಶ್ವತವಾದ ಪರಿಹಾರ ಕಂಡುಕೊಳ್ಳುವ ಕುರಿತು" ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರ ಹೇಳಿಕೆ.**

*****

ಕೊಡಗು ಜಿಲ್ಲೆಯಲ್ಲಿ ನಿರಂತರವಾಗಿ ಆನೆ ಮತ್ತು ವನ್ಯಜೀವಿಗಳ ದಾಳಿಯನ್ನು ತಪ್ಪಿಸಲು ಶಾಶ್ವತವಾದ ಪರಿಹಾರ ಮಾರ್ಗದ ರೂಪದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ರೈಲ್ವೇ ಬ್ಯಾರಿಕೇಡ್ ನಿರ್ಮಾಣ ಹಾಗೂ ಆನೆತಡೆ ನಿರೋಧಕ ಕಂದಕ, ಸೋಲಾರ್ ತಂತಿಬೇಲಿ ನಿರ್ಮಾಣ, ಕಾರ್ಯ ಕೈಗೊಂಡು ಮಾನವ-ವನ್ಯಪ್ರಾಣಿ ಸಂಘರ್ಷವನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಕೊಡಗು ಜಿಲ್ಲಾ ವ್ಯಾಪ್ತಿಯಲ್ಲಿ ಈವರೆಗೂ ನಿರ್ಮಾಣ ಮಾಡಲಾದ ಮತ್ತು ಪ್ರಗತಿಯಲ್ಲಿರುವ ರೈಲ್ವೇ ಬ್ಯಾರಿಕೇಡ್ ವಿವರ ಈ ಕೆಳಕಂಡಂತಿದೆ.

| ಕ್ರ. ಸಂ | ವಿಭಾಗ | 2023-24ನೇ ಸಾಲಿನವರೆಗೆ ಪೂರ್ಣಗೊಂಡ ರೈಲ್ವೆ ಬ್ಯಾರಿಕೇಡ್ (ಕಿ.ಮೀ.ಗಳಲ್ಲಿ) | ಪ್ರಗತಿಯಲ್ಲಿರುವ ರೈಲ್ವೇ ಬ್ಯಾರಿಕೇಡ್ (ಕಿ.ಮೀ.ಗಳಲ್ಲಿ) |
|---|---|---|---|
| 1 | ಮಡಿಕೇರಿ(ಪ್ರಾ) | 28.172 | 8.33 |
| 2 | ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ | 85.57 | 20.30 |
| | **ಒಟ್ಟು** | **113.742** | **28.36** |

ಅಲ್ಲದೆ, ಆನೆ ಮತ್ತು ಇತರೆ ವನ್ಯಜೀವಿಗಳ ಹಾವಳಿಯನ್ನು ತಡೆಗಟ್ಟಲು ಇಲಾಖೆಯು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳುತ್ತಿದೆ:-

**ಆನೆ ಕಾರ್ಯಪಡೆಗಳ ಸ್ಥಾಪನೆ:**

ಸರ್ಕಾರದ ಆದೇಶ ಸಂಖ್ಯೆ: FEE 170 FWL 2022, ದಿನಾಂಕ:21.11.2022 ರಲ್ಲಿ ಹಾಸನ, ಚಿಕ್ಕಮಗಳೂರು, ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಹಾಗೂ ಆದೇಶ ಸಂಖ್ಯೆ: FEE 311 FEG 2022 ದಿನಾಂಕ:01.02.2023ರಲ್ಲಿ ಚಾಮರಾಜನಗರ ಜಿಲ್ಲೆ ಹಾಗೂ ಆದೇಶ ಸಂಖ್ಯೆ: FEE 170 FWL 2022, ದಿನಾಂಕ:30.06.2023 ರಲ್ಲಿ ರಾಮನಗರ ಹಾಗೂ ಬೆಂಗಳೂರು ಜಿಲ್ಲೆಗಳಲ್ಲಿ ಮತ್ತು ಸರ್ಕಾರದ ಆದೇಶ ಸಂಖ್ಯೆ: FEE 34 FWL 2024, ದಿನಾಂಕ:18.05.2024 ರಲ್ಲಿ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಕಾಡಾನೆ ಹಾವಳಿಯನ್ನು ತಡೆಗಟ್ಟಲು ಪ್ರತಿ ಜಿಲ್ಲೆಗೊಂದರಂತೆ ಅಧಿಕಾರಿ / ಸಿಬ್ಬಂದಿಗಳನ್ನೊಳಗೊಂಡ 08 ಆನೆ ಕಾರ್ಯಪಡೆ (Elephant Task Force) ಗಳನ್ನು ರಚಿಸಲಾಗಿರುತ್ತದೆ.

**ಜಲ ಸಂಪನ್ಮೂಲ ಅಭಿವೃದ್ಧಿ:**

- ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸಸ್ಥಾನವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ.

**ಆವಾಸ ಸ್ಥಾನ ಅಭಿವೃದ್ಧಿ:**

- ಅರಣ್ಯ ಪ್ರದೇಶಗಳಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು ಹೆಚ್ಚಿನ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳಿಂದಾಗಿ ಹುಲ್ಲಿನ ಬೆಳವಣಿಗೆಗೆ ತೀವ್ರ ಅಡಚಣೆಯಾಗಿ ಅರಣ್ಯದಲ್ಲಿ ಹುಲ್ಲಿನ ಲಭ್ಯತೆ ಗಣನೀಯವಾಗಿ ಕಡಿಮೆಯಾಗಿರುವುದರಿಂದ ಹುಲ್ಲು ಬೆಳೆಯುವ ಪ್ರದೇಶಗಳಲ್ಲಿ ಬೆಳೆದಿರುವ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅನುವು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

**ತ್ವರಿತ ಕಾರ್ಯಾಚರಣೆ:**

- ಆನೆ ಕಾರ್ಯಪಡೆ (ETF) ಮತ್ತು ಚಿರತೆ ಕಾರ್ಯಪಡೆ (LTF) ಗಳಿಗೆ 24X7 ಕಾರ್ಯ ನಿರ್ವಹಿಸಲು ನಿಯಂತ್ರಣ ಕೊಠಡಿಯನ್ನು ಸ್ಥಾಪಿಸಿದ್ದು, ನಿಯಂತ್ರಣ ಕೊಠಡಿಗೆ ಬರುವ ಕರೆಗಳಿಗೆ ಸ್ಪಂದಿಸಿ ಕೂಡಲೇ ಕ್ರಮವಹಿಸಲಾಗುತ್ತಿದೆ.
- ಚಿರತೆ / ಹುಲಿ ಹಾವಳಿ ಹೆಚ್ಚಾಗಿರುವ ಸೂಕ್ಷ್ಮ ಪ್ರದೇಶಗಳಲ್ಲಿ ಬೋನುಗಳನ್ನು ಇರಿಸಿ ಸೆರೆ ಹಿಡಿದು, ಸೂಕ್ತ ಆವಾಸಸ್ಥಾನಕ್ಕೆ ಸ್ಥಳಾಂತರಿಸಲು ಕ್ರಮವಹಿಸಲಾಗುತ್ತಿದೆ.
- ಕಾಡಾನೆ ಹಾವಳಿ ತುರ್ತು ನಿರ್ವಹಣೆಗಾಗಿ ಕ್ಷಿಪ್ರ ಕಾರ್ಯಪಡೆ ತಂಡಗಳನ್ನು (RRT) ರಚಿಸಿ ನಿರ್ವಹಿಸಲಾಗುತ್ತಿದೆ.
- ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ.
- ನಿಸ್ತಂತು ಜಾಲದ ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.
- ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.
- ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ವ್ಯಾಪ್ತಿಯಲ್ಲಿ ಕಳೆದ ಸಾಲಿನಲ್ಲಿ 02 ಕಾಡಾನೆಗಳನ್ನು ಸೆರೆಹಿಡಿಯಲಾಗಿದ್ದು, ಅದರಲ್ಲಿ 01 ಆನೆಯನ್ನು ರೇಡಿಯೋ ಕಾಲರ್ ಅಳವಡಿಸಿ, ಸ್ಥಳಾಂತರಿಸಲಾಗಿದೆ ಹಾಗೂ ಇನ್ನೊಂದು ಆನೆಯನ್ನು ಮತ್ತಿಗೋಡು ಆನೆ ಶಿಬಿರಕ್ಕೆ ಸ್ಥಳಾಂತರಿಸಲಾಗಿದೆ.
- ನಾಗರಹೊಳೆ ಹುಲಿ ಸಂರಕ್ಷಿತ ವ್ಯಾಪ್ತಿಯಲ್ಲಿ ಕಳೆದ ಸಾಲಿನಲ್ಲಿ 01 ಹುಲಿಯನ್ನು ಸೆರೆಹಿಡಿದು ಸ್ಥಳಾಂತರಿಸಲಾಗಿದೆ.
- ವನ್ಯಪ್ರಾಣಿಗಳ ಹಾವಳಿ ಹೆಚ್ಚಾಗಿರುವ ಪ್ರದೇಶಗಳಲ್ಲಿ ಈಗಾಗಲೇ ರಚಿಸಿರುವ RRT, ADC, ಮತ್ತು ETF ಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ತಂಡಗಳನ್ನು ಒಟ್ಟುಗೂಡಿಸಿ ಮಾನವ-ವನ್ಯಜೀವಿ ಸಂಘರ್ಷ ಉಪ ತಂಡಗಳಾಗಿ ರಚಿಸಿ ಆಯ್ದ ಸ್ಥಳಗಳಲ್ಲಿ ನಿಯೋಜಿಸಲಾಗಿದೆ.

**ಅರಿವು ಮೂಡಿಸಲು:**

- ಕಾಡಾನೆಗಳ ಹಾವಳಿ ಹೆಚ್ಚಾಗಿರುವ ಪ್ರದೇಶದಲ್ಲಿ ಜನ ಸಂಪರ್ಕ ಸಭೆಯನ್ನು ಕರೆದು ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ.
- ಶಾಲಾಮಕ್ಕಳಿಗೆ ಅರಿವು ಮೂಡಿಸಲು "ಚಿಣ್ಣರ ವನದರ್ಶನ" ಕಾರ್ಯಕ್ರಮ ಕೈಗೊಳ್ಳಲಾಗುತ್ತಿದೆ.